Akashvani: Bangalore
National Bulletin In Kannada
27.12.2025 : 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

******

ಮುಖ್ಯಾಂಶಗಳು :

1. ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ಇಂದು ಮತ್ತು ನಾಳೆ ಪ್ರಧಾನ ಕಾರ್ಯದರ್ಶಿಗಳ ಐದನೇ ರಾಷ್ಟ್ರೀಯ ಸಮ್ಮೇಳನ
2. ದೇಶಾದ್ಯಂತ ಏಕರೂಪದ ಭಯೋತ್ಪಾದನಾ ನಿಗ್ರಹ ದಳ ರಚನೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಕರೆ
3. ಉನ್ನಾವ್ ಪ್ರಕರಣ: ಮಾಜಿ ಶಾಸಕ ಕುಲದೀಪ್ ಸಿಂಗ್ ಸೆಂಗಾರ್‌ಗೆ ವಿಧಿಸಿದ್ದ ಶಿಕ್ಷೆ ರದ್ದು ಪ್ರಶ್ನಿಸಿ, ಸುಪ್ರೀಂಕೋರ್ಟ್ ಮೊರೆಹೋದ ಸಿಬಿಐ
4. ಮಹಿಳಾ ಟಿ-೨೦ ಕ್ರಿಕೆಟ್: ಶ್ರೀಲಂಕಾ ವಿರುದ್ಧ ಸರಣಿ ವಶಪಡಿಸಿಕೊಂಡ ಭಾರತ

**********

ನವದೆಹಲಿಯಲ್ಲಿ ಮೂರು ದಿನಗಳ ಪ್ರಧಾನ ಕಾರ್ಯದರ್ಶಿಗಳ ಐದನೇ ರಾಷ್ಟ್ರೀಯ ಸಮ್ಮೇಳನ ನಡೆಯುತ್ತಿದೆ. ಇಂದು ಮತ್ತು ನಾಳೆ ಪ್ರಧಾನಿ ನರೇಂದ್ರ ಮೋದಿ ಸಮ್ಮೇಳನದ ಅಧ್ಯಕ್ಷತೆ ವಹಿಸಲಿದ್ದಾರೆ. ರಾಷ್ಟ್ರೀಯ ಅಭಿವೃದ್ಧಿ ಆದ್ಯತೆಗಳ ಕುರಿತು ರಚನಾತ್ಮಕ ಮತ್ತು ನಿರಂತರ ಸಂವಾದದ ಮೂಲಕ ಕೇಂದ್ರ - ರಾಜ್ಯ ಪಾಲುದಾರಿಕೆಯನ್ನು ಬಲಪಡಿಸುವಲ್ಲಿ ಈ ಸಮ್ಮೇಳನ ಮತ್ತೊಂದು ಪ್ರಮುಖ ಮೈಲಿಗಲ್ಲನ್ನು ಗುರುತಿಸುತ್ತದೆ. ಈ ಸಮ್ಮೇಳನ, ಕೇಂದ್ರ ಮತ್ತು ರಾಜ್ಯಗಳು ಸಹಕರಿಸುವ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ. ಅಲ್ಲದೇ, ಭಾರತದ ಮಾನವ ಬಂಡವಾಳ ಸಾಮರ್ಥ್ಯವನ್ನು ಹೆಚ್ಚಿಸಲು ಮತ್ತು ಸಮಗ್ರ, ಭವಿಷ್ಯಕ್ಕೆ ಸಿದ್ಧವಾದ ಬೆಳವಣಿಗೆಯನ್ನು ವೇಗಗೊಳಿಸಲು ಏಕೀಕೃತ ಮಾರ್ಗಸೂಚಿಯನ್ನು ವಿನ್ಯಾಸಗೊಳಿಸುತ್ತದೆ. ಸಾಮಾನ್ಯ ಅಭಿವೃದ್ಧಿ ಕಾರ್ಯಸೂಚಿಯನ್ನು ಅಂತಿಮಗೊಳಿಸುವ ಗುರಿಯನ್ನು ಹೊಂದಿರುವ ಚರ್ಚೆಗಳಿಗೆ ಸಮ್ಮೇಳನ ವೇದಿಕೆ ಒದಗಿಸುತ್ತದೆ. ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಅನುಸರಿಸಬೇಕಾದ

ಉತ್ತಮ ಅಭ್ಯಾಸಗಳು ಮತ್ತು ತಂತ್ರಗಳನ್ನು ಒಳಗೊಂಡ "ವಿಕಸಿತ ಭಾರತಕ್ಕಾಗಿ ಮಾನವ ಬಂಡವಾಳ" ಎಂಬ ವಿಷಯದ ಮೇಲೆ ಸಮ್ಮೇಳನವು ಗಮನಹರಿಸುತ್ತದೆ.

**********

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದಿನಿಂದ ಕರ್ನಾಟಕ, ಗೋವಾ ಮತ್ತು ಜಾರ್ಖಂಡ್‌ಗೆ ನಾಲ್ಕು ದಿನಗಳ ಭೇಟಿ ನೀಡಲಿದ್ದಾರೆ. ರಾಷ್ಟ್ರಪತಿ ಅವರು ಇಂದು ಸಂಜೆ ಗೋವಾಕ್ಕೆ ತೆರಳಲಿದ್ದಾರೆ. ನಾಳೆ ಅವರು ಕರ್ನಾಟಕದ ಕಾರವಾರದ ನೌಕಾ ನೆಲೆಯಲ್ಲಿ ಜಲಾಂತಾರ್ಗಾಮಿ ನೌಕೆಯಲ್ಲಿ ಪ್ರಯಾಣಿಸಲಿದ್ದಾರೆ. ಬಳಿಕ ಇದೇ ೨೯ ರಂದು ಜಾರ್ಖಂಡ್‌ನ ಜಮ್‌ಶಡ್‌ಪುರದಲ್ಲಿ ನಡೆಯಲಿರುವ ಓಲ್ ಚಿಕಿ ಶತಮಾನೋತ್ಸವ ಸಮಾರಂಭದಲ್ಲಿ ರಾಷ್ಟ್ರಪತಿ ಅವರು ಭಾಗವಹಿಸಲಿದ್ದಾರೆ. ಅದೇ ದಿನ ಅವರು, ಜಮ್‌ಶಡ್‌ಪುರದ ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆಯ-ಎನ್‌ಐಟಿ ೧೫ನೇ ಘಟಿಕೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ಇದೇ ೩೦ ರಂದು ಅವರು ದುಮ್ಕಾದಲ್ಲಿ ನಡೆಯುವ ಅಂತಾರಾಜ್ಯ ಜನಸಾಂಸ್ಕೃತಿಕ ಸಮಾಗಮದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

**********

ದೇಶಾದ್ಯಂತ ಏಕರೂಪದ ಭಯೋತ್ಪಾದನಾ ನಿಗ್ರಹ ದಳ-ಎಟಿಎಸ್ ರಚಿಸುವಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಕರೆ ನೀಡಿದ್ದಾರೆ ಮತ್ತು ಇದನ್ನು ಆದಷ್ಟು ಬೇಗ ಜಾರಿಗೆ ತರುವಂತೆ ರಾಜ್ಯ ಪೊಲೀಸ್ ಮಹಾನಿರ್ದೇಶಕರಿಗೆ ನಿರ್ದೇಶನ ನೀಡಿದ್ದಾರೆ. ಇಡೀ ದೇಶಾದ್ಯಂತ ಏಕರೂಪದ ಎಟಿಎಸ್ ರಚನೆಯು ಪ್ರತಿ ಹಂತದಲ್ಲೂ ಭಯೋತ್ಪಾದಕ ದಾಳಿಗಳನ್ನು ಎದುರಿಸಲು ಪೊಲೀಸರಿಗೆ ಏಕರೂಪದ ಸಿದ್ಧತೆಗೆ ಅವಕಾಶವನ್ನು ಒದಗಿಸುತ್ತದೆ ಎಂದು ಅವರು ಹೇಳಿದರು. ನವದೆಹಲಿಯಲ್ಲಿ ನಿನ್ನೆ ರಾಷ್ಟ್ರೀಯ ತನಿಖಾ ಸಂಸ್ಥೆ ಆಯೋಜಿಸಿದ್ದ ಎರಡು ದಿನಗಳ 'ಭಯೋತ್ಪಾದನಾ ನಿಗ್ರಹ ಸಮ್ಮೇಳನ-೨೦೨೫' ಉದ್ಘಾಟಿಸಿ, ಅವರು ಮಾತನಾಡಿದರು. ಏಕರೂಪದ ಎಟಿಎಸ್ ರಚನೆ ನಿಟ್ಟಿನಲ್ಲಿ ಎನ್‌ಐಎ ವ್ಯಾಪಕವಾಗಿ ಕೆಲಸ ಮಾಡಿದೆ. ಅಲ್ಲದೇ ಈ ಕುರಿತ ಮಾಹಿತಿಯನ್ನು ಈಗಾಗಲೇ ರಾಜ್ಯ ಪೊಲೀಸ್ ಪಡೆಗಳೊಂದಿಗೆ ಹಂಚಿಕೊಂಡಿದೆ. ಏಕರೂಪದ ಎಟಿಎಸ್ ರಚನೆಯು

ದೇಶಾದ್ಯಂತ ಪ್ರತಿಯೊಂದು ಹಂತದಲ್ಲೂ ಪ್ರಮಾಣೀಕೃತ ಸನ್ನದ್ಧತೆ ಮತ್ತು ಪ್ರತಿಕ್ರಿಯೆ ಕಾರ್ಯವಿಧಾನಗಳನ್ನು ಖಚಿತಪಡಿಸುತ್ತದೆ ಎಂದು ಸಚಿವ ಅಮಿತ್ ಶಾ ಹೇಳಿದರು.

**********

ಕೇರಳದ ಶಬರಿಮಲೆ ಅಯ್ಯಪ್ಪ ಸ್ವಾಮಿ ದೇವಸ್ಥಾನದಲ್ಲಿ ೪೧ ದಿನಗಳ ಮಂಡಲ ವ್ರತದ ಅತ್ಯಂತ ಪವಿತ್ರವಾದ ಆಚರಣೆಯಾದ ಮಂಡಲ ಪೂಜೆ ಇಂದು ನಡೆಯಲಿದೆ. ಸಮಾರಂಭದ ಭಾಗವಾಗಿ, ದೇವರನ್ನು ಚಿನ್ನದ ಉಡುಪಿನಿಂದ ಅಲಂಕರಿಸಿ, ನಂತರ ವಿಶೇಷ ಪ್ರಾರ್ಥನೆಗಳನ್ನು ಸಲ್ಲಿಸಲಾಗುವುದು. ತಿರುವಾಂಕೂರು ದೇವಸ್ವಂ ಮಂಡಳಿಯು, ಜನಸಂದಣಿ ನಿರ್ವಹಣೆ, ಭದ್ರತೆ, ವೈದ್ಯಕೀಯ ಸೇವೆ ಮತ್ತು ಯಾತ್ರಿಕರ ಸೌಲಭ್ಯಗಳಿಗಾಗಿ ವ್ಯವಸ್ಥೆಗಳನ್ನು ಮಾಡಿದೆ. ಅಧಿಕೃತ ಮಾರ್ಗಸೂಚಿಗಳ ಪ್ರಕಾರ, ಮಂಡಲ ಪೂಜೆಯ ಅವಧಿಯಲ್ಲಿ ದರ್ಶನದ ಸುಗಮ ನಿರ್ವಹಣೆಗಾಗಿ ವರ್ಚುವಲ್ ಕ್ಯೂ ಮತ್ತು ಸೀಮಿತ ಸ್ಥಳ ಬುಕಿಂಗ್‌ಗಳ ವ್ಯವಸ್ಥೆ ಮಾಡಲಾಗಿದೆ. ಮಂಡಲ ಪೂಜೆಯ ನಂತರ ದೇವಾಲಯ ಮುಚ್ಚಲಾಗುತ್ತದೆ ಮತ್ತು ಮಕರ ವಿಲಕ್ಕು ತೀರ್ಥಯಾತ್ರೆಯ ಋತುವಿನ ದಿನವಾದ ಡಿಸೆಂಬರ್ ೩೦ ರಂದು ಮತ್ತೆ ದೇವಾಲಯವನ್ನು ತೆರೆಯಲಾಗುತ್ತದೆ.

**********

ಉನ್ನಾವ್ ಅತ್ಯಾಚಾರ ಪ್ರಕರಣದಲ್ಲಿ ಉತ್ತರ ಪ್ರದೇಶದ ಮಾಜಿ ಶಾಸಕ ಕುಲದೀಪ್ ಸಿಂಗ್ ಸೆಂಗಾರ್ ಅವರಿಗೆ ಜೀವಾವಧಿ ಶಿಕ್ಷೆಯನ್ನು ಅಮಾನತುಗೊಳಿಸಿ, ಜಾಮೀನು ನೀಡಿದ ದೆಹಲಿ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ, ಕೇಂದ್ರ ತನಿಖಾ ದಳ-ಸಿಬಿಐ, ಸುಪ್ರೀಂಕೋರ್ಟ್ ಮೊರೆ ಹೋಗಿದೆ. ಹೈಕೋರ್ಟ್ ತೀರ್ಪಿನ ವಿರುದ್ಧ ಸಿಬಿಐ ನಿನ್ನೆ ಸುಪ್ರೀಂ ಕೋರ್ಟ್‌ನಲ್ಲಿ ವಿಶೇಷ ರಜೆ ಅರ್ಜಿ ಸಲ್ಲಿಸಿದೆ. ಕುಲದೀಪ್ ಸಿಂಗ್ ಅವರಿಗೆ ವಿಧಿಸಿದ್ದ  ಜೀವಾವಧಿ ಶಿಕ್ಷೆಯ ವಿರುದ್ಧದ ಮೇಲ್ಮನವಿ ಬಾಕಿ ಇರುವಾಗ ಅವರ ಶಿಕ್ಷೆಯನ್ನು ಅಮಾನತುಗೊಳಿಸುವಂತೆ ಹೈಕೋರ್ಟ್ ಈ ವಾರದ ಆರಂಭದಲ್ಲಿ ಆದೇಶಿಸಿತು ಮತ್ತು ಅವರಿಗೆ ಷರತ್ತುಬದ್ಧ ಜಾಮೀನು ಸಹ ನೀಡಿತು.   ಉತ್ತರ ಪ್ರದೇಶದ ವಿಶೇಷ ಸಿಬಿಐ ನ್ಯಾಯಾಲಯ, ೨೦೧೯ ರಲ್ಲಿ ಸೆಂಗಾರ್ ಅವರನ್ನು ಅಪರಾಧಿ ಎಂದು ಘೋಷಿಸಿತು ಮತ್ತು ೨೫ ಲಕ್ಷ ರೂಪಾಯಿ ದಂಡದೊಂದಿಗೆ ಜೀವಾವಧಿ ಶಿಕ್ಷೆ ವಿಧಿಸಿತು. ಅವರು ೨೦೨೦ ರ ಜನವರಿಯಲ್ಲಿ ದೆಹಲಿ ಹೈಕೋರ್ಟ್‌ನಲ್ಲಿ ತಮ್ಮ ಶಿಕ್ಷೆಯ ವಿರುದ್ಧ ಮೇಲ್ಮನವಿ ಸಲ್ಲಿಸಿದ್ದರು ಮತ್ತು ನಂತರ ೨೦೨೨ರ

ಮಾರ್ಚ್‌ನಲ್ಲಿ ಶಿಕ್ಷೆಯನ್ನು ಅಮಾನತುಗೊಳಿಸುವಂತೆ ಮನವಿ ಸಲ್ಲಿಸಿದ್ದರು. ಅತ್ಯಾಚಾರ ಪ್ರಕರಣದಲ್ಲಿ ಜಾಮೀನು ಆದೇಶದ ಹೊರತಾಗಿಯೂ, ಕುಲದೀಪ್ ಸಿಂಗ್ ಸೆಂಗಾರ್, ಕೊಲೆಗೆ ಸಂಬಂಧಿಸಿದ ಮತ್ತೊಂದು ಪ್ರಕರಣದಲ್ಲಿ ೧೦ ವರ್ಷಗಳ ಶಿಕ್ಷೆಯನ್ನು ಅನುಭವಿಸುತ್ತಿರುವುದರಿಂದ ಅವರು ಜೈಲಿನಲ್ಲಿಯೇ ಇರಲಿದ್ದಾರೆ.

**********

ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೨೯ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮವು ಎಲ್ಲಾ ಆಕಾಶವಾಣಿ ಮತ್ತು ದೂರದರ್ಶನ ವಾಹಿನಿಗಳು, ಆಕಾಶವಾಣಿ ಸುದ್ದಿ ವೆಬ್‌ಸೈಟ್ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ ಜಾಲತಾಣ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

**********

ಬಾಂಗ್ಲಾದೇಶದ ಚಟ್ಟೋಗ್ರಾಮ್ ಪ್ರದೇಶದಲ್ಲಿ ನಿನ್ನೆ ಸಂಜೆ ೩.೯ ತೀವ್ರತೆಯ ಭೂಕಂಪ ಸಂಭವಿಸಿದೆ. ರಾಷ್ಟ್ರೀಯ ಭೂಕಂಪಶಾಸ್ತ್ರ ಕೇಂದ್ರದ ಪ್ರಕಾರ, ನಿನ್ನೆ ಸಂಜೆ ೬ ಗಂಟೆ ೧೩ ನಿಮಿಷಕ್ಕೆ ಭೂಮಿಯ ಮೇಲ್ಮೈಯಿಂದ ೧೦ ಕಿಲೋಮೀಟರ್ ಆಳದಲ್ಲಿ ಕಂಪನ ಸಂಭವಿಸಿದೆ. ಯಾವುದೇ ಹಾನಿ ಅಥವಾ ಸಾವು-ನೋವುಗಳ ಬಗ್ಗೆ ವರದಿಯಾಗಿಲ್ಲ.

**********

ಎಚ್೧-ಬಿ ವೀಸಾಗಳನ್ನು ಹೊಂದಿರುವ ಭಾರತೀಯ ಪ್ರಜೆಗಳಿಗೆ ಉಂಟಾಗುವ ಅಡೆತಡೆಗಳನ್ನು ಪರಿಹರಿಸಲು ಅಮೆರಿಕಾದೊಂದಿಗೆ ಭಾರತ ಸಕ್ರಿಯವಾಗಿ ತೊಡಗಿಕೊಂಡಿದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ. ಈ ಕುರಿತು ನವದೆಹಲಿಯಲ್ಲಿ

ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು, ಅಮೆರಿಕಾ ವೀಸಾಗಾಗಿ ಸಮಯ ನಿಗದಿಪಡಿಸುವಲ್ಲಿ ಆಗುತ್ತಿರುವ ವಿಳಂಬ ಮತ್ತು ತೊಂದರೆಗಳನ್ನು ಎದುರಿಸುತ್ತಿರುವ ಭಾರತೀಯ ಪ್ರಜೆಗಳಿಂದ ಸರ್ಕಾರ ಅನೇಕ ಅರ್ಜಿಗಳನ್ನು ಸ್ವೀಕರಿಸಿದೆ ಎಂದು ಹೇಳಿದರು. ವಿಳಂಬದಿಂದಾಗಿ ಎಚ್೧-ಬಿ ವೀಸಾ ಅವಲಂಬಿತ ವ್ಯಕ್ತಿಗಳು ಮತ್ತು ಅವರ ಕುಟುಂಬಗಳಿಗೆ ಶಿಕ್ಷಣ ಸೇರಿದಂತೆ ವಿವಿಧ ರೀತಿಯಲ್ಲಿ ಅಡ್ಡಿಯಾಗುತ್ತಿದೆ. ಈ ಕುರಿತು ನವದೆಹಲಿ ಮತ್ತು ವಾಷಿಂಗ್ಟನ್ ಡಿಸಿಯಲ್ಲಿರುವ ಅಮೆರಿಕಾದ ಅಧಿಕಾರಿಗಳೊಂದಿಗೆ ಚರ್ಚಿಸಲಾಗಿದೆ ಎಂದು ಅವರು ತಿಳಿಸಿದರು. ಇದೇ ವೇಳೆ, ಬಾಂಗ್ಲಾದೇಶದ ಮೈಮೆನ್ಸಿಂಗ್ ನಗರದಲ್ಲಿ ಇತ್ತೀಚೆಗೆ ಹಿಂದೂ ಯುವಕನ ಹತ್ಯೆಯನ್ನು ಖಂಡಿಸಿದ ರಣಧೀರ್ ಜೈಸ್ವಾಲ್, ಈ ಪ್ರಕರಣದಲ್ಲಿ ಭಾಗಿಯಾಗಿರುವ ಅಪರಾಧಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು. ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಅವಧಿಯಲ್ಲಿ ಹತ್ಯೆ, ಬೆಂಕಿ ಹಚ್ಚುವಿಕೆ, ಭೂಕಬಳಿಕೆ ಸೇರಿದಂತೆ ಅಲ್ಪಸಂಖ್ಯಾತರ ವಿರುದ್ಧ ೨ ಸಾವಿರದ ೯೦೦ಕ್ಕೂ ಹೆಚ್ಚು ಹಿಂಸಾಚಾರ ಪ್ರಕರಣಗಳು ದಾಖಲಾಗಿವೆ ಎಂದು ಅವರು ಮಾಹಿತಿ ನೀಡಿದರು.

**********

ತಿರುವನಂತಪುರದ ಗ್ರೀನ್‌ಫೀಲ್ಡ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐದು ಪಂದ್ಯಗಳ ಮಹಿಳಾ ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್ ಸರಣಿಯ ಮೂರನೇ ಪಂದ್ಯದಲ್ಲಿ ಶ್ರೀಲಂಕಾ ವಿರುದ್ಧ ಭಾರತ ತಂಡ ೮ ವಿಕೆಟ್‌ಗಳ ಭರ್ಜರಿ ಗೆಲುವು ದಾಖಲಿಸಿದೆ. ಈ ಮೂಲಕ ೩-೦ ಅಂತರದಲ್ಲಿ ಸರಣಿಯನ್ನು ಭಾರತ ವಶಪಡಿಸಿಕೊಂಡಿದೆ. ಮೊದಲು ಬ್ಯಾಟಿಂಗ್ ಮಾಡಿದ ಶ್ರೀಲಂಕಾ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೧೨ ರನ್ ಗಳಿಸಿತು. ಗೆಲುವಿನ ಗುರಿಯನ್ನು ಬೆನ್ನತ್ತಿದ ಭಾರತ ೧೩.೨ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೧೧೫ ರನ್ ಗಳಿಸುವ ಮೂಲಕ ಗೆಲುವಿನ ನಗೆ ಬೀರಿತು. ಭಾರತದ ಪರ ಶಫಾಲಿ ವರ್ಮಾ ೪೨ ಎಸೆತಗಳಿಗೆ ಅಜೇಯ ೭೯ರನ್ ಗಳಿಸಿದರು. ೪ ವಿಕೆಟ್‌ಗಳನ್ನು ಪಡೆದ ರೇಣುಕಾ ಸಿಂಗ್ ಠಾಕೂರ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

**********

ಸೊಮಾಲಿಯಾದಿಂದ ಬೇರ್ಪಟ್ಟ ಸೊಮಾಲಿಲ್ಯಾಂಡ್ ಪ್ರದೇಶವನ್ನು ಸ್ವತಂತ್ರ ರಾಷ್ಟ್ರವೆಂದು ಔಪಚಾರಿಕವಾಗಿ ಗುರುತಿಸಿದ ಮೊದಲ ದೇಶ ಇಸ್ರೇಲ್ ಆಗಿದೆ. ಕೃಷಿ, ಆರೋಗ್ಯ ಮತ್ತು ತಂತ್ರಜ್ಞಾನದಲ್ಲಿ ಸಹಕಾರವನ್ನು ತಕ್ಷಣವೇ ವಿಸ್ತರಿಸಲು ಇಸ್ರೇಲ್ ಉದ್ದೇಶಿಸಿದೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ. ಇಸ್ರೇಲ್-ಸೊಮಾಲಿಲ್ಯಾಂಡ್ ಪೂರ್ಣ ರಾಜತಾಂತ್ರಿಕ ಸಂಬಂಧಗಳನ್ನು ಸ್ಥಾಪಿಸಲು ಒಪ್ಪಿಕೊಂಡಿವೆ. ಇದರಲ್ಲಿ ರಾಯಭಾರಿಗಳ ನೇಮಕಾತಿ ಮತ್ತು ರಾಯಭಾರ ಕಚೇರಿಗಳ ತೆರೆಯುವಿಕೆ ಸೇರಿವೆ ಎಂದು ಇಸ್ರೇಲ್ ವಿದೇಶಾಂಗ ಸಚಿವ ಗಿಡಿಯಾನ್ ಸಾರ್ ತಿಳಿಸಿದ್ದಾರೆ. ಸೊಮಾಲಿಲ್ಯಾಂಡ್ ಅಧ್ಯಕ್ಷ ಅಬ್ದಿರೆಹಮಾನ್ ಮೊಹಮ್ಮದ್ ಅಬ್ದುಲ್ಲಾಹಿ, ಈ ಕ್ರಮವನ್ನು ಐತಿಹಾಸಿಕ ಕ್ಷಣ ಎಂದು ಬಣ್ಣಿಸಿದ್ದಾರೆ.

**********